**ಪ್ರಧಾನಮಂತ್ರಿಗೆ ನಮೀಬಿಯಾದ ಅತ್ಯುನ್ನತ ನಾಗರಿಕ ಪ್ರಶಸ್ತಿ ಪ್ರದಾನ (ಜುಲೈ 09, 2025)**

ಜುಲೈ 09, 2025

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ನಮೀಬಿಯಾಕ್ಕೆ ಅಧಿಕೃತ ಭೇಟಿಯಲ್ಲಿದ್ದಾರೆ. ಈ ಸಂದರ್ಭದಲ್ಲಿ, ನಮೀಬಿಯಾದ ಅಧ್ಯಕ್ಷೆ, ಗೌರವಾನ್ವಿತ ನೆಟುಂಬೊ ನಂದಿ-ಎಂದೈಟ್ವಾ ಅವರು ನಮೀಬಿಯಾದ ಅತ್ಯುನ್ನತ ನಾಗರಿಕ ಪ್ರಶಸ್ತಿ - ಆರ್ಡರ್ ಆಫ್ ದಿ ಮೋಸ್ಟ್ ಏನ್ಷಿಯೆಂಟ್ ವೆಲ್ವಿಟ್ಚಿಯಾ ಮಿರಾಬಿಲಿಸ್- ಅನ್ನು ಪ್ರಧಾನಮಂತ್ರಿಯವರಿಗೆ ಪ್ರದಾನ ಮಾಡಿದರು. ಮೋದಿ ಅವರು ಈ ಪ್ರಶಸ್ತಿಗೆ ಭಾಜನರಾದ ಮೊದಲ ಭಾರತೀಯ ನಾಯಕರಾಗಿದ್ದಾರೆ.

2. ಪ್ರಶಸ್ತಿಯನ್ನು ಸ್ವೀಕರಿಸಿದ ಪ್ರಧಾನಮಂತ್ರಿಯವರು, ಈ ಗೌರವವನ್ನು ಭಾರತದ 1.4 ಶತಕೋಟಿ ಜನರಿಗೆ ಹಾಗೂ ಭಾರತ ಮತ್ತು ನಮೀಬಿಯಾ ನಡುವಿನ ಐತಿಹಾಸಿಕ ಮತ್ತು ಶಾಶ್ವತ ಸಂಬಂಧಗಳಿಗೆ ಅರ್ಪಿಸಿದರು. ಈ ಗೌರವಕ್ಕಾಗಿ ಅಧ್ಯಕ್ಷೆ ನಂದಿ-ಎಂದೈಟ್ವಾ ಮತ್ತು ನಮೀಬಿಯಾದ ಜನರಿಗೆ ಪ್ರಧಾನಮಂತ್ರಿಯವರು ಹೃದಯಪೂರ್ವಕ ಕೃತಜ್ಞತೆ ವ್ಯಕ್ತಪಡಿಸಿದರು.

3. ಪ್ರಧಾನಮಂತ್ರಿಯವರಿಗೆ ಪ್ರಶಸ್ತಿ ಪ್ರದಾನ ಮಾಡಿರುವುದು ಭಾರತ ಮತ್ತು ನಮೀಬಿಯಾ ನಡುವಿನ ದ್ವಿಪಕ್ಷೀಯ ಸಂಬಂಧಗಳಲ್ಲಿ ಒಂದು ಮೈಲಿಗಲ್ಲಾಗಿದೆ ಮತ್ತು ಈ ವಿಶೇಷ ದ್ವಿಪಕ್ಷೀಯ ಪಾಲುದಾರಿಕೆಯನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯಲು ಎರಡೂ ದೇಶಗಳ ಯುವ ಪೀಳಿಗೆಗೆ ಸ್ಫೂರ್ತಿಯ ಮೂಲವಾಗಿದೆ.

ವಿಂಡ್ಹೋಕ್

ಜುಲೈ 09, 2025